ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ-01-ಅಉಅ-2017-18/ನೇವಿ1

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಶೇಷಾದ್ರಿ ರಸ್ತೆ, ಬೆಂಗಳೂರು-560 001

ದಿನಾಂಕ: 18-07-2017

ಸುತ್ತೋಲೆ

ವಿಷಯ: ಅತಿಥಿ ಉಪನ್ಯಾಸಕರ ಆಯ್ಕೆ ಬಗ್ಗೆ.

///

ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಸರ್ಕಾರಿ ಪದವಿ ಕಾಲೇಜುಗಳಿಗೆ ವಿವಿಧ ವಿಷಯಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಆಯ್ಕೆಯಾದ ಅಭ್ಯರ್ಥಿಗಳ ನೇಮಕಾತಿ ಆದೇಶಗಳು ಸರ್ಕಾರದಿಂದ ದಿನಾಂಕ:17-07-2017ರಂದು ಇಲಾಖೆಯಲ್ಲಿ ಸ್ವೀಕೃತವಾಗಿರುತ್ತದೆ. ಈ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಸಂಬಂಧ ಕೌನ್ಸಲಿಂಗ್ ಪ್ರಕ್ರಿಯೆಯನ್ನು ಪ್ರಾರಂಭಿಸಬೇಕಾಗಿರುತ್ತದೆ. ಈ ಅಭ್ಯರ್ಥಿಗಳಿಗೆ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಿದ ನಂತರ ಆಯಾ ಕಾಲೇಜುಗಳಿಂದ ಉಳಿಯುವ ಹೆಚ್ಚುವರಿ ಕಾರ್ಯಭಾರದ ವಿವರಗಳನ್ನು ಪಡೆದು ಆ ಕಾರ್ಯಭಾರಕ್ಕೆ ಎದುರಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಬೇಕಾಗಿರುವುದರಿಂದ ಈಗಾಗಲೇ ಆಯ್ಕೆ ಮಾಡಿರುವ ಅತಿಥಿ ಉಪನ್ಯಾಸಕರನ್ನು ಹೊರತುಪಡಿಸಿ ಇಂದಿನಿಂದ ನಡೆಯುವ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯನ್ನು ಮೂರು (03) ದಿನಗಳ ಕಾಲ ತಾತ್ಕಾಲಿಕವಾಗಿ ತಡೆಹಿಡಿಯುವಂತೆ ಸೂಚಿಸಲಾಗಿದೆ.

ನಿರ್ದೇಶಕರು
**ಕಾಲೇಜು ಶಿಕ್ಷಣ ಇಲಾಖೆ**

**ಇವರಿಗೆ:**

1) ಕಾಲೇಜು ಶಿಕ್ಷಣ ಇಲಾಖೆಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.